ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ,
ಕುಂದಾಪುರ

ಸಿ.ಸಿ. ನಂಬ್ರಃ2117/2019

ಚಾಸಾಃ 1 ಪ್ರಾಸಾಃ1

ದಿನಾಂಕಃ 03-12-2022

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ಜೊಸೇಫ್ |
| ತಂದೆಯ ಹೆಸರು | : | ತಂಗಚ್ಚನ್ |
| ವಯಸ್ಸು | : | 26 ವರ್ಷ |
| ಉದ್ಯೋಗ | : | ಐ ಟಿ ಕಂಪೆನಿ |
| ವಾಸ ಸ್ಥಳ | : | ಜಡ್ಕಲ್ |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**<u>ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ.ರವರಿಂದಃ</u>**

ನನಗೆ ಚಾಸಾ-2 ರವರ ಪರಿಚಯವಿಲ್ಲ. ಮೃತ ಮಹಮ್ಮದ್ ಸುಹೈಲ್, ಚಾಸಾ-3 ರಿಂದ 5 ರವರ ಪರಿಚಯವಿಲ್ಲ. ಮೃತ ಭರತ್ ನನ್ನ ಸ್ನೇಹಿತ. ನ್ಯಾಯಾಲಯದ ಮುಂದೆ ಇರುವ ಆರೋಪಿಯನ್ನು ಕಳೆದ ಬಾರಿ ನ್ಯಾಯಾಲಯಕ್ಕೆ ಬಂದಾಗ ನೋಡಿರುತ್ತೇನೆ. ನನ್ನ ವಾಹನಕ್ಕೆ ಅಪಘಾತವಾಗಿರುತ್ತದೆ. ನಾನು ಪೊಲೀಸರಿಗೆ ಯಾವುದೇ ದೂರನ್ನು ನೀಡಿರುವುದಿಲ್ಲ. ಯಾರ ತಪ್ಪಿನಿಂದ ಅಪಘಾತವಾಗಿರುತ್ತದೆ ಎಂದು ನನಗೆ ಗೊತ್ತಿಲ್ಲ. ನಂತರ ಬೊಲೇರಾ ವಾಹನದಿಂದ ಎಂದು ಗೊತ್ತಾಗಿರುತ್ತದೆ. ನನಗೆ ಅಪಘಾತದಲ್ಲಿ ಗಾಯವಾಗಿತ್ತು. ಭರತ್ ಅಪಘಾತದಲ್ಲಿ ಮೃತಪಟ್ಟಿರುತ್ತಾರೆ. ಆ ಬೊಲೇರಾ ವಾಹನವನ್ನು ಯಾರು ಚಲಾಯಿಸುತ್ತಿದ್ದರು ಎಂದು ನಾನು ನೋಡಿರುವುದಿಲ್ಲ. ಸಾಕ್ಷಿಗೆ ಕಡತದಲ್ಲಿರುವ ದೂರು ದಾಖಲೆಯನ್ನು ತೋರಿಸಲಾಗಿ, ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಅದನ್ನು ನಿಪಿ-1 ಎಂದು, ಅದರಲ್ಲಿನ ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ಪೊಲೀಸರು ನನ್ನನ್ನು ವಿಚಾರಣೆ ಮಾಡಿ ಮರು ಹೇಳಿಕೆ ಪಡೆದಿಲ್ಲ, ಬರೇ ಸಹಿ ಮಾತ್ರ ಪಡೆದಿರುತ್ತಾರೆ.

(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಗೆ ವಿರುದ್ಧವಾಗಿ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸ.ಸ.ಅ.ರವರು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)

**ಪಾಟೀ ಸವಾಲುಃ ಮಾನ್ಯ ಸ.ಸ.ಅ.ರವರಿಂದಃ**

ದಿಃ 21-04-2019 ರಂದು ಆರೋಪಿಯು ಕೆಎ-20-ಪಿ-9867 ಬೊಲೇರೋ ವಾಹನದಲ್ಲಿ ಮೃತ ಮಹಮ್ಮದ್ ಸುಹೈಲ್, ಚಾಸಾ-3 ರಿಂದ 5 ರವರನ್ನು ಕೂರಿಸಿಕೊಂಡು ದಾವಣಗೆರೆ ಕಡೆಯಿಂದ ಉಡುಪಿ ಕಡೆಗೆ ರಾ.ಹೆ66 ರಲ್ಲಿ ಚಲಾಯಿಸಿಕೊಂಡು ಬರುತ್ತಿದ್ದು, ಮಧ್ಯಾಹ್ನ 12 ಗಂಟೆ ಸಮಯಕ್ಕೆ ತ್ರಾಸಿ ಗ್ರಾಮದ ತ್ರಾಸಿ ಫ್ಲೈಓವರ್ ಸೇತುವೆಯ ಸಮೀಪ ವಾಹನವನ್ನು ಅತೀ ವೇಗ ಹಾಗೂ ಅಜಾಗರೂಕತೆಯಿಂದ ಚಲಾಯಿಸಿಕೊಂಡು ತ್ರಾಸಿ ಕಡೆಯಿಂದ ಕುಂದಾಪುರದ ಕಡೆಗೆ ಹೋಗುತ್ತಿದ್ದ ನನ್ನ ಕೆಎ-20-ಇಕೆ-8825 ಟಿವಿಎಸ್ ಜೂಪೀಟರ್ ವಾಹನಕ್ಕೆ ಹಿಂದಿನಿಂದ ಡಿಕ್ಕಿ ಹೊಡೆದು ಬೊಲೇರೋ ವಾಹನ ಚಾಲಕನ ನಿಯಂತ್ರಣ ತಪ್ಪಿ ಬಿದ್ದು 2-3 ಪಲ್ಟಿಯಾಗಿ ರಸ್ತೆಯ ಮೇಲೆ ಬಿದ್ದಿರುತ್ತದೆ ಎಂದರೆ ಸರಿಯಲ್ಲ. ಸದ್ರಿ ಅಪಘಾತದಿಂದ ಬೊಲೇರೋ ವಾಹನದಲ್ಲಿ ಪ್ರಯಾಣಿಸುತ್ತಿದ್ದ ಮಹಮ್ಮದ್ ಸುಹೈಲ್ ರವರಿಗೆ ತೀವ್ರ ಸ್ವರೂಪದ ಗಾಯವಾಗಿ ಮೃತಪಟ್ಟಿದ್ದು, ಚಾಸಾ-3 ರವರಿಗೆ ತೀವ್ರ ಸ್ವರೂಪದ ಗಾಯವಾಗಿ, ಚಾಸಾ-2 ಮತ್ತು 4 ರವರಿಗೆ ಸಾಮಾನ್ಯ ಸ್ವರೂಪದ ಗಾಯ ಆಗಿರುತ್ತದೆ ಎಂದರೆ ನನಗೆ ಗೊತ್ತಿಲ್ಲ, ನನಗೆ ತೀವ್ರ ಸ್ವರೂಪದ ಗಾಯವಾಗಿ ನನ್ನ ಜೊತೆ ಇದ್ದ ನನ್ನ ಸಹ ಸವಾರನಾದ ಭರತ್ ಎಂಬುವರಿಗೆ ತೀವ್ರ ಸ್ವರೂಪದ ಗಾಯ ಉಂಟಾಗಿ ಮೃತಪಟ್ಟಿರುತ್ತಾರೆ ಎಂದರೆ ಸರಿ. ಈ ಬಗ್ಗೆ ನಾನು ನಿಪಿ-1 ರಂತೆ ಪೊಲೀಸರಿಗೆ ದೂರು ನೀಡಿರುತ್ತೇನೆ ಎಂದರೆ ಸರಿಯಲ್ಲ.

ದಿಃ 24-04-2019 ರಂದು ಪೊಲೀಸರಿಗೆ ಮರುಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದ್ರಿ ಹೇಳಿಕೆಯನ್ನು ನಿಪಿ-2 ಎಂದು ಗುರುತಿಸಲಾಯಿತು. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.**

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ. ದಂ. ಕುಂದಾಪುರ**